**ಕರ್ನಾಟಕ ಸರ್ಕಾರ**
**ಸಮಾಜ ಕಲ್ಯಾಣ ಇಲಾಖೆ**
**ಸಹಾಕಯ ನಿರ್ದೇಶಕರು(ಗ್ರೇಡ್-1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ,**
**ಬೆಂಗಳೂರು ದಕ್ಷಿಣ ತಾಲ್ಲೂಕು.ಎಸ್ ಕರಿಯಪ್ಪ ಮುಖ್ಯರಸ್ತೆ, ಬನಶಂಕರಿ, ಬೆಂಗಳೂರು 560070**
**ದೂರವಾಣಿ ಸಂಖ್ಯೆ: 080-26711096** **EmailId tswobloresouth@gmail.com**


ಸನಿ/ಸಕಇ/ಬೆಂ(ದ)/ಮೆ.ನಂ.ವಿವೇ&ಇತರೆ/ಸಿ.ಆರ್- 31/2023-24 ದಿನಾಂಕ :- 06/10/2023

**ಸುತ್ತೋಲೆ**

ವಿಷಯ:- 2023-24 ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಬೆಂಗಳೂರು ನಗರ ಜಿಲ್ಲೆ ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯಾಪ್ತಿಯ ವಿವಿಧ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ /ವರ್ಗದ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ವಿದ್ಯಾರ್ಥಿವೇತನ ಅರ್ಜಿಯನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (SSP) ದಲ್ಲಿ ನಿಯಮಾನುಸಾರ ಅರ್ಜಿ ಸಲ್ಲಿಸಲು ಕುರಿತು.

ಉಲ್ಲೇಖ:- ಮಾನ್ಯ ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ರವರ ಅಧಿಕೃತ ಜ್ಞಾಪನಾ ಪತ್ರ ಸಂ:

**********

2023-24 ನೇ ಸಾಲಿಗೆ ಪೋಷಕರ ವಾರ್ಷಿಕ ವಾರ್ಷಿಕ ಆದಾಯ 2.50 ಲಕ್ಷದೊಳಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಆನ್ ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಲು ಇ-ಆಡಳಿತ ಇಲಾಖೆಯಿಂದ ಮೆಟ್ರಿಕ್ ನಂತರದ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (SSP) ದಲ್ಲಿ ಅರ್ಜಿಯನ್ನು ಆಹ್ವಾನಿಸಿದ್ದು, ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಅರ್ಜಿಯನ್ನು ಸಲ್ಲಿಸಲು ತಮ್ಮ ಕಾಲೇಜಿನಲ್ಲಿಯೇ ಕಂಪ್ಯೂಟರ್ ಮತ್ತು ಇಂಟರ್‌ನೆಟ್ ವ್ಯವಸ್ಥೆಯನ್ನು ಒದಗಿಸಿ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

**ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಈ ಕೆಳಕಂಡ ವೆಬ್ ಸೈಟನ್ನು ಬಳಸಬೇಕಾಗಿರುತ್ತದೆ.**

**https://ssp.postmatric.karnataka.gov.in**

ಮೊದಲನೇ ಬಾರಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಹೊಸದಾಗಿ ಖಾತೆಯನ್ನು ಸೃಜನೆ ಮಾಡಿಕೊಂಡು ನಂತರ ವಿದ್ಯಾರ್ಥಿಲಾಗಿನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವುದು. ಈಗಾಗಲೇ ಹಿಂದಿನ ವರ್ಷದಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ ಮತ್ತೊಮ್ಮೆ ಖಾತೆಯನ್ನು ಸೃಜಿಸುವ ಅವಶ್ಯಕತೆ ಇರುವುದಿಲ್ಲ. ಅಂತಹ ವಿದ್ಯಾರ್ಥಿಗಳು ನೇರವಾಗಿ ವಿದ್ಯಾರ್ಥಿಲಾಗಿನ್ ನಲ್ಲಿ ಅರ್ಜಿಯನ್ನು ಸಲ್ಲಿಸುವುದು.

**ವಿದ್ಯಾರ್ಥಿವೇತನಕ್ಕೆ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಈ ಕೆಳಕಂಡ ದಾಖಲಾತಿಗಳ ಅಗತ್ಯವಿರುತ್ತದೆ.**

1. ವಿದ್ಯಾರ್ಥಿಗಳ ಆದಾರ್ ಸಂಖ್ಯೆ ಮತ್ತು ಆಧಾರ್‌ನಲ್ಲಿ ಇರುವ ಹಾಗೆ ಹೆಸರು
2. ವಿದ್ಯಾರ್ಥಿಯ ಮೊಬೈಲ್ ಸಂಖ್ಯೆ.

3. ವಿದ್ಯಾರ್ಥಿಯ ಇ-ಮೇಲ್ ಐಡಿ
4. ವಿದ್ಯಾರ್ಥಿಯ SSLC ನೋಂದಣಿ ಸಂಖ್ಯೆ
5. ವಿದ್ಯಾರ್ಥಿಯ ಹೆಸರಿನಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರದ RD ಸಂಖ್ಯೆ
6. ವಿದ್ಯಾರ್ಥಿಯು ವಿಕಲಚೇತನರಾಗಿದ್ದಲ್ಲಿ ಯು.ಡಿ.ಐ.ಡಿ ಗುರುತಿನ ಸಂಖ್ಯೆ
7. ವಿದ್ಯಾರ್ಥಿಯು ವಾಸವಿರುವ ಜಿಲ್ಲೆ,ತಾಲ್ಲೂಕು, ವಿಧಾನ ಸಭಾ ಕ್ಷೇತ್ರದ ಹೆಸರು ಮತ್ತು ಮನಯ ವಿಳಾಸ
8. ವಿದ್ಯಾರ್ಥಿಯ ಕಾಲೇಜು ದಾಖಲಾತಿ/ನೋಂದಣಿ ಸಂಖ್ಯೆ
9. ಸಂಬಂಧಪಟ್ಟ ದಾಖಲೆಗಳ ಇ-ದೃಡೀಕರಣ ಸಂಖ್ಯೆ (ಅನ್ವಯವಾದಲ್ಲಿ)
10. ಹಾಸ್ಟೆಲ್ ವಿವರಗಳು (ಅನ್ವಯವಾದಲ್ಲಿ)

ಸರ್ಕಾರಿ ಇಲಾಖಾ ವಿದ್ಯಾರ್ಥಿನಿಲಯ/ಸರ್ಕಾರಿ/ಖಾಸಗಿ ವಿಶ್ವವಿದ್ಯಾಲಯ/ಸರ್ಕಾರಿ/ಖಾಸಗಿ ಕಾಲೇಜು ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳು ಹಾಸ್ಟೆಲ್ ಸ್ಕಾಲರ್ ವಿದ್ಯಾರ್ಥಿವೇತನ ಪಡೆಯಲು ಸಂಬಂಧಪಟ್ಟ ಹಾಸ್ಟೆಲ್ ವಾರ್ಡನ್ ಕಡೆಯಿಂದ SHP/SSP-HMIS ಪೋರ್ಟಲ್‌ನಲ್ಲಿ Update ಮಾಡಿಸುವುದು.

ವಿದ್ಯಾರ್ಥಿವೇತನಕ್ಕೆ ಆನ್ ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸುವ ಮೊದಲು ವಿದ್ಯಾರ್ಥಿಗಳು ತಾವು ಹೊಂದಿರುವ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಖಡ್ಡಾಯವಾಗಿ ಜೋಡಣೆ( Seed/Link Aadhaar to Bank Account and NPCI) ಮಾಡಿಸುವುದು.

ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಬಗ್ಗೆ ಹೆಚ್ಚಿನ ಮಾಹಿತಿಯನ್ನು (**https://ssp.postmatric.karnataka.gov.in**) ನಲ್ಲಿ ಪಡೆಯಬಹುದಾಗಿರುತ್ತದೆ ಹಾಗೂ ಸಹಾಯಕ ನಿರ್ದೇಶಕರ ಕಚೇರಿ (ಗ್ರೇಡ್-1) ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬನಶಂಕರಿ, ದೂರವಾಣಿ ಸಂ:080-26711096 ನ್ನು ಸಂಪರ್ಕಿಸುವುದು.

ತಮ್ಮ ಕಾಲೇಜಿನ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ಮತ್ತು ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಅರ್ಜಿ ಸಲ್ಲಿಸುವಂತೆ ಸೂಚನೆ ನೀಡಿ ಎಲ್ಲಾ ವಿದ್ಯಾರ್ಥಿಗಳು ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವ ಬಗ್ಗೆ ಖಾತ್ರಿ ಮಾಡಿಕೊಳ್ಳುವುದು. ಒಂದು ವೇಳೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸದೇ ವಿದ್ಯಾರ್ಥಿವೇತನ ಮಂಜೂರಾಗದೇ ಇದ್ದಲ್ಲಿ ಆಯಾ ಕಾಲೇಜಿನ ಪ್ರಾಂಶುಪಾಲರುಗಳೇ ನೇರ ಹೊಣೆಗಾರರಾಗಿರುತ್ತಾರೆ ಎಂದು ತಿಳಿಸಲಾಗಿದೆ.

ಸಹಾಯಕ ನಿರ್ದೇಶಕರು (ಗ್ರೇಡ್-1)
ಸಮಾಜ ಕಲ್ಯಾಣ ಇಲಾಖೆ
ಬೆಂಗಳೂರು ದಕ್ಷಿಣ ತಾಲ್ಲೂಕು

**ಪ್ರತಿಯನ್ನು:-**

**ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿಶ್ವವಿದ್ಯಾಲಯ/ಕಾಲೇಜು ಮುಖ್ಯಸ್ಥರುಗಳಿಗೆ ರವಾನಿಸುತ್ತಾ, ಅರ್ಜಿ ಸಲ್ಲಿಸುವ ಸಂಬಂಧ ಮಾಹಿತಿಯನ್ನು ಪ.ಜಾತಿ/ವರ್ಗದ ವಿದ್ಯಾರ್ಥಿಗಳಿಗೆ ನೀಡಿ ಎಲ್ಲಾ ವಿದ್ಯಾರ್ಥಿಗಳಿಗೆ ನೀಡಿ ಎಲ್ಲಾ ವಿದ್ಯಾರ್ಥಿಗಳು ನಿಗದಿತ ಅವಧಿಯೊಳಗೆ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವಂತೆ ಅಗತ್ಯ ಸಲ್ಲಿಸುವಂತೆ ಅಗತ್ಯ ಕ್ರಮವಹಿಸಲು ಕೋರಿದೆ.**